# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ 21.05.2022 ರಂದು ವಾರ್ಡ್ ಕಛೇರಿಯಲ್ಲಿ ಬೆಳ್ಳಿಗೆ 11.00 ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡಕ್ರಮದ ಬಗ್ಗೆ ಚರ್ಚಿಸಲಾಯಿತು.

1. **ಘನತ್ಯಾಜ್ಯ ನಿರ್ವಹಣೆ:**
   1. ವಾರ್ಡ್ 07 ರಲ್ಲಿಘಣತ್ಯಾಜ್ಯಾ ನಿರ್ವಹಣೆಗೆ ಸಂಬಂದಿಸಿದಂತೆ ಹೆಚ್ಚುವರಿ ಪೌರಕಾರ್ಮಿಕರನ್ನು ನಿಯೋಜಿಕೊಳ್ಳುವ ಕಡತ ಪ್ರಸುತ್ತ ವಿಶೇಷ ಆಯುಕ್ತರು ಘ.ನಿ ಬಿಬಿಎಂಪಿ ರವರಕಛೇರಿಯಲ್ಲಿಇರುವುದಾಗಿಕಿರಿಯಆರೋಗ್ಯ ಪರಿವೀಕ್ಷಕರು ತಿಳಸಿರುತ್ತಾರೆ.
   2. ಘಣತ್ಯಾಜ್ಯಾ ನಿರ್ವಹಣೆಗೆ ಸಂಬಂದಿಸಿದಂತೆ, ವಾರ್ಡ್‌ನಲ್ಲಿ ಹಸಿ/ಒಣತ್ಯಾಜ್ಯಾ ವಿಂಗಡಣೆ ಸಂಪರ್ಕವಾಗಿ ನಡೆಯುತ್ತಿರುವುದಿಲ್ಲ ಎಂದು ತಿಳಿಸಿರುತ್ತಾರೆ.
   3. ಒಣ ತ್ಯಾಜ್ಯ ಸಂಗ್ರಹಣೆ ವಾರದಲ್ಲಿಎರಡು ದಿನ ಮಾಡುವಂತೆ ನೇತಾಜಿನಗರದ ನಿವಾಸಿಗಳು ಕೋರಿರುತ್ತಾರೆ.
   4. ರಸ್ತೆಗಳಲ್ಲಿ ಬಿದ್ದಿರುವ ಒಣ ಎಲೆಗಳನ್ನು ಸಂಗ್ರಹಣೆ ಮಾಡಿರಸ್ತೆ ಸ್ವಚ್ಛತೆ ಮಾಡಿರುವ ಬಗ್ಗೆ ಸಂತಸ ವ್ಯಕ್ತಪಡಿಸಿರುತ್ತಾರೆ.
2. **ಆರೋಗ್ಯ ಇಲಾಖೆ:**
   1. ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ನಲ್ಲಿಇರುವ Bulk generators and commercial establishments and apartments doing wet composting at their premises ಬಗ್ಗೆ ಮಾಹಿತಿಯನ್ನು ನೀಡಲು ಸಭೆಯಲ್ಲಿ ಮನವಿ ಮಾಡಲಾಯಿತು.
   2. ಪ್ರೆಸ್ಟೇಜ್ ಅಪಾರ್ಟ್‌ಮೆಂಟ್‌ರವರ ಕಾಮಗಾರಿ ಸ್ಥಳದಲ್ಲಿ ನಿರ್ಮಿಸಿರುವ ತಾತ್ಕಾಲಿಕ ಶಾಚಲಯಗಳನು ತೆರವುಗೊಳಿಸಿಕೊಡಬೇಕೆಂದು ಮನವಿ ಮಾಡಲಾಯಿತು.
3. **ಕಾಮಗಾರಿ ವಿಭಾಗ:**
   1. ರಸ್ತೆಗಳಲ್ಲಿ ಎಲ್ಲೆ ಆಗಲೀ ರಸ್ತೆ ಗುಂಡಿಗಳು ಕಂಡು ಬಂದರೆಕೂಡಲೇ ವಾರ್ಡ್‌ಕಛೇರಿಗೆ ತಿಳಿಸಲು ಸೂಚಿಸಿದೆ.
   2. ಕಾಶೀನಗರ/ಮೀಸೆ ಹನುಮಂತಪ್ಪ ಬಡಾವಣೆಯ ರಸ್ತೆಗಳನ್ನು ಓಳಚರಂಡಿ ಸಂಪರ್ಕಕ್ಕಾಗಿ ರಸ್ತೆಗಳನ್ನು ಅಗೆದಿರುವ ರಸ್ತೆಗಳಿಗೆ ಕಾಂಕ್ರಿಟ್ ಹಾಕುವ ಕೆಲಸವನ್ನು ಶೀಘ್ರದಲ್ಲಿ ನಿರ್ವಹಿಸಿಕೊಡುವುದಾಗಿ ತಿಳಿಸಲಾಯಿತು.
   3. ನೋಡಲ್ ಅಧಿಕಾರಿಗಳು ಮಳೆಯಿಂದ ಅಗುವ ಅನಾಹುತಗಳನ್ನು ತಡೆಯಲು ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು ಹಾಗೂ ಅಧಿಕಾರಿಗಳಿಗೆ ಸೂಚನೆಯನ್ನು ನೀಡಿದರು.

4. **ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:**
   1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು. ಪಂಪಾ ಬಡಾವಣೇ ಮತ್ತು ಬ್ಯಾಟರಾಯನಪುರ ಅಯ್ಯಪ್ಪ ದೇವಸ್ಥಾನದ ರಸ್ತೆಯಲ್ಲಿ ಬೀದಿ ದೀಪಗಳ ಕೊರತೆವಿರುವುದಾಗಿ ತಿಳಿಸಿರುತ್ತಾರೆ.
   2. ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
   3. ವಾರ್ಡ್‌ಕಛೇರಿಯ ಆವರಣದಲ್ಲಿ ಒಂದು ವಿದ್ಯುತ್ ದೀಪವನ್ನು ಅಳವಡಿಸಬೇಕೆಂದು ತಿಳಿಸಲಾಯಿತು.

5. **ಕಂದಾಯ ವಿಭಾಗ:**
   1. ವಾರ್ಡ್ ವ್ಯಾಪ್ತಿಯಲ್ಲಿನಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.

6. **ಜಲಮಂಡಳಿ ವಿಭಾಗ:**
   1. ಬ್ಯಾಟರಾಯನಪುರದಲ್ಲಿ ಸ್ಯಾನಿಟರಿ ಚೇಂಬರ್‌ಗಳು ಹೆಚ್ಚಾಗಿ ಮಣ್ಣಿನಿಂದ ತುಂಬಿದ್ದು, ಇವುಗಳನ್ನು ಸುವುಗೊಳಿಸಿಕೊಡಬೇಕೆಂದು ಮನವಿ ಮಾಡಿದರು. ಅದರಂತೆ ರಾಜೇಶ್ ಬಿಡಬ್ಲುಎಸ್‌ಎಸ್‌ಬಿ ವಿಭಾಗದವರು ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.
   2. ಬ್ಯಾಟರಾಯನಪುರ ಗ್ರಾಮಠಾಣದ ಭಾಗದಲ್ಲಿ ಹೊಸದಾಗಿ ಒಳಚರಂಡಿ ಸಂಪರ್ಕವನ್ನು ಕಲ್ಪಿಸಲು ಮನವಿ ಮಾಡಿರುತ್ತಾರೆ.
   3. ಕಾಫಿ ಬೋರ್ಡ್ ಬಡಾವಣೆಯಲ್ಲಿನ 03ನೇ ಮುಖ್ಯರಸ್ತೆಯಲಿನ 4–5 ಮನೆಗಳಿಗೆಕುಡಿಯುವ ನೀರು ಸರಬರಾಜು ಇಲ್ಲದೆ ವಿರುವ ಬಗ್ಗೆ ಕ್ರಮವಹಿಸಲು ಮನವಿ ಮಾಡಿರುತ್ತಾರೆ. ಸದರಿ ವಿಷಯದ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೆ ಇರುವ ಬಗ್ಗೆ ದೂರುದಾರರ ಬೇಸರ ವ್ಯಕ್ತ ಪಡಿಸಿರುತ್ತಾರೆ.

ಕಾರ್ಯದರ್ಶಿ
ವಾರ್ಡ್ 07